ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **1021/2022**

ಪಿ.ಡಬ್ಲ್ಯೂ-**1**
ಸಿ.ಡಬ್ಲ್ಯೂ-**1**

ಸಾಕ್ಷಿಗೆ ದಿನಾಂಕ **12.03.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಗಂಗಮ್ಮ

ಗಂಡನ ಹೆಸರು : ರಾಮಣ್ಣ

ವಯಸ್ಸು : 43 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಮಾರುತಿ ನಗರ, ಹೊಸದುರ್ಗ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನ್ಯಾಯಾಲಯದ ಮುಂದೆ ಇರುವ ಆರೋಪಿ ನನ್ನ ಅಳಿಯ ,

ಚಾ.ಸಾ-4 ನನ್ನ ಮಗಳು, ಚಾಸಾ -2, 3,5 ಮತ್ತು 6 ರವರ ಪರಿಚಯವಿರುತ್ತದೆ.

ನನ್ನ ಮತ್ತು ಆರೋಪಿತರ ನಡುವೆ ಯಾವುದೇ ಜಗಳ ನಡೆದಿಲ್ಲ. ಆರೋಪಿ ನನಗೆ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ. ನನ್ನ ಮೇಲೆ ಹಲ್ಲೆ ನಡೆಸಿಲ್ಲ ಮತ್ತು ನನ್ನ ಮಾನಕ್ಕೆ ಕುಂದುಂಟುಮಾಡಿಲ್ಲ, ನಾನು ಯಾವುದೇ ಚಿಕಿತ್ಸೆ ಪಡೆದಿರುವುದಿಲ್ಲ. ಘಟನೆಗೆ ಸಂಬಂಧಿಸಿದಂತೆ ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಸಾಕ್ಷಿಯು ಹೇಳಿಕೆ ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಹೇಳಿಕೆಯನ್ನು ನಿಪಿ-01 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-01(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕೃತ್ಯ ಸ್ಥಳ ಅಮಾನತ್ತು ಮಹಜರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-02 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-02(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-03 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-03(ಎ) ಎಂದು ಗುರುತಿಸಲಾಯಿತು.

ನಿಪಿ1 ಮತ್ತು 2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಮಹಜರ್ ಮಾಡಿ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಕೋಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>

ದಿನಾಂಕ 20.11.2021 ರಂದು ಸಂಜೆ 4.30 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಹತ್ತಿರ ಇರುವಾಗ ಆರೋಪಿ ಅಲ್ಲಿಗೆ ಬಂದು ಹಳೆಯ ದ್ವೇಷದಿಂದ ಏಕಾಏಕಿ ನನಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ . ಆಗ ಅಲ್ಲಿಗೆ ಬಂದ ಚಾಸಾ 4 ಏಕೆ ಬೈಯುತ್ತೀಯ ಎಂದು ಕೇಳಿದಾಗ ಆರೋಪಿ ಅಲ್ಲೇ ಇದ್ದ ಒಂದು ಕೋಲನ್ನು ತೆಗೆದುಕೊಂಡು ನನ್ನ ತಲೆಯ ಮದ್ಯಭಾಕ್ಕೆ ಹೊಡೆದು ರಕ್ತಗಾಯ ಪಡಿಸಿದರು ಎಂದರೆ ಸರಿಯಲ್ಲ . ಅಷ್ಟರಲ್ಲಿ ಚಾಸಾ 5 ಮತ್ತು 6 ರವರು ಬಂದು ಗಲಾಟೆ ಬಿಡಿಸಿದರು ಎಂದರೆ ಸರಿಯಲ್ಲ . ಚಾಸಾ 4 ನನ್ನನ್ನು ಉಪಚರಿಸಿ ಒಂದು ಆಟೋದಲ್ಲಿ ಹೊಸದುರ್ಗದ ಸರ್ಕಾರಿ ಆಸ್ಪತ್ರೆಗೆ ಬಂದು ಚಿಕಿತ್ಸೆಗಾಗಿ ದಾಖಲಾದೆನು ಎಂದರೆ ಸರಿಯಲ್ಲ . ಈ ಕುರಿತು ನಿಪಿ-1 ರಂತೆ ಪೊಲೀಸರು ಆಸ್ಪತ್ರೆಗೆ ಬಂದು ನನ್ನ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 21.11.2021 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಾಗ ನಾನು ಸ್ಥಳದಲ್ಲಿ ಹಾಜರಿದ್ದು, ಸ್ಥಳ ತೋರಿಸಿದಂತೆ ಚಾಸಾ. 2 ಮತ್ತು 3 ರ ಸಮಕ್ಷಮ ನಿಪಿ-2 ರಂತೆ ಬೆಳಿಗ್ಗೆ 9.30 ರಿಂದ 10.30 ಗಂಟೆಯವರೆಗೆ ಮಹಜರ್ ಕ್ರಮ ಜರುಗಿಸಿ ಸ್ಥಳದಲ್ಲಿ 1 ಕೋಲನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಸಂದರ್ಭದಲ್ಲಿ ನಿಪಿ-3 ರನ್ನು ಸಹ ಬರೆಯಲಾಗಿತ್ತು ಎಂದರೆ ಸರಿಯಲ್ಲ.

ಆರೋಪಿ ನನ್ನ ಅಳಿಯ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಆರೋಪಿಯೊಂದಿಗೆ ರಾಜೀಯಾಗಿದ್ದೇನೆಂದರೆ ಸರಿ. ರಾಜಿ ಆಗಿರುವ ಕಾರಣ ನಿಪಿ-1 ರಂತೆ ಹೇಳಿಕೆ ದೂರು ನೀಡಿದ್ದು , ನಿಪಿ-2 ರಂತೆ ಮಹಜರ್ ಕಾಲದಲ್ಲಿ ಹಾಜರಿದ್ದರೂ ಸಹ ಆರೋಪಿ ನನ್ನ ಅಳಿಯನಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿ ಪರ ಶ್ರೀ ಒ ಎಂ ವಕೀಲರಿಂದ</u>

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.